# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1306 (1283) |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22 /08/2025 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯ ವ್ಯಾಪ್ತಿಗೆ ಬರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳು ಯಾವುವು; (ಯೋಜನೆವಾರು ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಿಂದ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಲು ಜಾರಿಗೊಳಿಸುತ್ತಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಯೋಜನೆಗಳು ಈ ಕೆಳಕಂಡಂತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯ ಅರ್ಹ ಫಲಾನುಭವಿಗಳಿಗೆ ಹಾಗೂ ಅವರ ಅವಲಂಬಿತರಿಗೆ ಅವರ ಕಲ್ಯಾಣ ಮತ್ತು ಸಾಮಾಜಿಕ ಭದ್ರತೆಗಾಗಿ ಮಂಡಳಿಯ ವತಿಯಿಂದ ನೀಡುತ್ತಿರುವ ವಿವಿಧ ಬಗೆಯ ಸೌಲಭ್ಯಗಳ ವಿವರ **ಅನುಬಂಧ-1** ರಲ್ಲಿ ಒದಗಿಸಿದೆ. ಆದರೆ ಕೇಂದ್ರ ಸರ್ಕಾರದ ಯಾವುದೇ ಯೋಜನೆಗಳನ್ನು ಮಂಡಳಿಯಲ್ಲಿ ಅನುಷ್ಠಾನ ಮಾಡುತ್ತಿಲ್ಲ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-</u>**<br>ಈ ಮಂಡಳಿಯಲ್ಲಿ ಜಾರಿಗೊಳಿಸುತ್ತಿರುವ ರಾಜ್ಯ ಸರ್ಕಾರ/ಕೇಂದ್ರ ಸರ್ಕಾರ ಯೋಜನೆಗಳು ಈ ಕೆಳಕಂಡಂತಿದೆ.<br><br>➢ **ರಾಜ್ಯ ಸರ್ಕಾರದ ಯೋಜನೆಗಳು:**<br><br>**(1) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಈಗಾಗಲೇ ಜಾರಿಯಲ್ಲಿದ್ದ, ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯನ್ನು ಪರಿಷ್ಕರಿಸಲಾಗಿದ್ದು, ಅಸಂಘಟಿತ ವರ್ಗಗಳಾದ "ಕ್ಷೌರಿಕರು, ಗೃಹ ಕಾರ್ಮಿಕರು, ಅಕ್ಕಸಾಲಿಗರು, ಹಮಾಲರು, ಕಮ್ಮಾರರು, ಚಿಂದಿ ಆಯಯುವವರು, ಟೈಲರ್ಸ್, ಮಂಡಕ್ಕಿ ಭಟ್ಟಿ, ಕಾರ್ಮಿಕರು ಸೇರಿದಂತೆ ಒಟ್ಟು 91 ಅಸಂಘಟಿತ ವರ್ಗಗಳ ಕಾರ್ಮಿಕರನ್ನು "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ"ಯಡಿ ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗುತ್ತಿದ್ದು, ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |

| | | |
|---|---|---|
| | | **(ಅ) ಅಪಘಾತ ಪರಿಹಾರ ಸೌಲಭ್ಯ**<br>• ಮರಣ ಪ್ರಕರಣ - ರೂ.1.00 ಲಕ್ಷದವರೆಗೆ ಅಪಘಾತ ಪರಿಹಾರ.<br>• ಅಪಘಾತದಿಂದುಟಾಗುವ ಸಂಪೂರ್ಣ ಶಾಶ್ವತ/ ಭಾಗಶಃ ದುರ್ಬಲತೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) - ರೂ.1.00 ಲಕ್ಷದವರೆಗೆ ಪರಿಹಾರ.<br>• ಆಸ್ಪತ್ರೆ ವೆಚ್ಚ ಮರುಪಾವತಿ - ರೂ.50,000/- ದವರೆಗೆ.<br><br>**(ಆ) ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ)**<br>ನೋಂದಾಯಿತ ಫಲಾನುಭವಿಯು ವಯೋಸಹಜ/ ಖಾಯಿಲೆ/ ಅಕಾಲಿಕ ಅಥವಾ ಇನ್ನಿತರೆ ಕಾರಣಗಳಿಂದ ಮರಣ ಹೊಂದಿದಲ್ಲಿ ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ. 10,000/-ಗಳ ಧನ ಸಹಾಯ ಸೌಲಭ್ಯ.<br><br>**(2) ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:-**<br>ಸ್ವಿಗ್ಗಿ, ಜೊಮಾಟೋಗಳಂತಹ ಸಂಸ್ಥೆಗಳಲ್ಲಿ ಫುಡ್‌ಡೆಲಿವರಿ ಮಾಡುವ ಹಾಗೂ ಇ-ಕಾಮರ್ಸ್ ಸಂಸ್ಥೆಗಳಾದ ಅಮೆಜಾನ್, ಫ್ಲಿಫ್‌ಕಾರ್ಟ್, ಬಿಗ್‌ಬಾಸ್ಕೆಟ್, ಪೋರ್ಟರ್, ಫಾರ್ಮಸಿ, ಬ್ಲಿಂಕಿಟ್, ಜೆಪ್ಟೋ, ಬಿಗ್ ಬಾಸ್ಕೆಟ್, ಡಾಮಿನೋಜ್ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡ ಗಿಗ್ ಕಾರ್ಮಿಕರಿಗಾಗಿ "ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ"ಯನ್ನು ಜಾರಿಗೊಳಿಸಲಾಗಿದೆ. ಸದರಿ ಗಿಗ್ ಕಾರ್ಮಿಕರು ಸೇವಾ ಸಿಂಧು ಪೋರ್ಟಲ್ ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ.<br><br>**ದೊರಕುವ ಸೌಲಭ್ಯಗಳು:**<br>• ಅಪಘಾದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ2.00 ಲಕ್ಷ ಹಾಗೂ ಜೀವ ವಿಮೆ ರೂ 2.00 ಲಕ್ಷ ಸೇರಿ ಒಟ್ಟು ರೂ.4.00 ಲಕ್ಷಗಳು.<br>• ಅಪಘಾದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ<br>• ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ)<br>• ಜೀವ ವಿಮಾ ರೂ.2.00 ಲಕ್ಷಗಳು.<br><br>**(3) ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:-**<br><br>ಅಸಂಘಟಿತ ವಲಯದ ವ್ಯಾಪ್ತಿಯಲ್ಲಿ ಬರುವ ದಿನಪತ್ರಿಕೆ ವಿತರಿಸುವ ಕಾರ್ಮಿಕರು ಅರೆಕಾಲಿಕ ವೃತ್ತಿ |

ನಿರ್ವಹಿಸುತ್ತಿದ್ದು, ಪ್ರತಿನಿತ್ಯ ಸಾರ್ವಜನಿಕರ ಮನೆ ಬಾಗಿಲಿಗೆ ಪತ್ರಿಕೆಗಳನ್ನು ವಿತರಿಸುವ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಸದರಿ ಕಾರ್ಮಿಕರು ಮಂಡಳಿಯ ಪೋರ್ಟಲ್ ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ.

**ದೊರಕುವ ಸೌಲಭ್ಯಗಳು:**

- ಅಪಘಾತದಿಂದ ಮರಣ ಹೊಂದಿದಲ್ಲಿ ರೂ2.00 ಲಕ್ಷ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ (ಶೇಕಡವಾರು ದುರ್ಬಲತೆ ಆಧಾರದಮೇಲೆ).
- ಅಪಘಾತ ಅಥವಾ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ.
- ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ) ರೂ.10,000/-ಗಳು.

**(4) ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:-**

ಖಾಸಗಿ ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸಲು ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದಿಂದ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024ನ್ನು ಅಧಿಸೂಚಿಸಲಾಗಿದ್ದು, ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಪ್ರತ್ಯೇಕವಾಗಿ, "ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ"ಯನ್ನು ರಚಿಸಲಾಗಿರುತ್ತದೆ.

**ದೊರಕುವ ಸೌಲಭ್ಯಗಳು:**

**(ಅ) ಅಪಘಾತ ಪರಿಹಾರ ಸೌಲಭ್ಯ:**

- ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮನಿರ್ದೇಶಿತರಿಗೆ ರೂ.5 ಲಕ್ಷಗಳ ಪರಿಹಾರ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷಗಳ ವರೆಗೆ ಪರಿಹಾರ.
- ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷದವರೆಗೆ.

**(ಆ) ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯಸಂಸ್ಕಾರ ವೆಚ್ಚ:**

ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯ ಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ.

**(ಇ) ಶೈಕ್ಷಣಿಕ ಧನಸಹಾಯ :**

**ನೋಂದಾಯಿತ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**

- 12ನೇ ತರಗತಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.3,000/-
- ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.5,500/-
- ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.8,000/-
- ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.11,000/-

**ಅಪಘಾತದಿಂದ ನಿಧನರಾದ/ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**

- 1ನೇ ತರಗತಿಯಿಂದ ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.10,000/-
- ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.20,000/-
- ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.25,000/-

**(ಈ) ಹೆರಿಗೆ ಸಹಾಯ ಧನ:**

ಫಲಾನುಭವಿಯ ಮೊದಲ ಎರಡು ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/-ಗಳು.

➢ **ಕೇಂದ್ರ ಸರ್ಕಾರದ ಯೋಜನೆಗಳು:**

1. **ಇ-ಶ್ರಮ್ ಕಾರ್ಯಕ್ರಮ (ಅಸಂಘಟಿತ ಕಾರ್ಮಿಕರ ನೋಂದಣಿ):-**

ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಅಸಂಘಟಿತ ಕಾರ್ಮಿಕರ ದತ್ತಾಂಶವನ್ನು ಸಂಗ್ರಹಿಸುವ ಉದ್ದೇಶದಿಂದ, ಇ-ಶ್ರಮ್ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಿದ್ದು, ಯೋಜನೆಯಡಿ 16-59 ವಯೋಮಾನದ ಇ.ಎಸ್.ಐ ಹಾಗೂ ಇ.ಪಿ.ಎಫ್ ಸೌಲಭ್ಯವನ್ನು ಹೊಂದಿರದ ಹಾಗೂ ಆದಾಯ ತೆರಿಗೆ ಪಾವತಿ ಮಾಡದ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸುತ್ತಿದ್ದು, ಅವರು ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ ಅಥವಾ ಸ್ವಯಂ ಆಗಿ ಇ-ಶ್ರಮ್ ಪೋರ್ಟಲ್‌ನಲ್ಲಿ (eshram.gov.in) ಉಚಿತವಾಗಿ ನೋಂದಾಯಿಸಬಹುದಾಗಿದ್ದು, ಗುರುತಿನ ಚೀಟಿಯನ್ನು ನೋಂದಾಯಿತ ಸ್ಥಳದಲ್ಲೇ ವಿತರಿಸಲಾಗುತ್ತದೆ.

| | | |
|---|---|---|
| | | 2. **ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್‌ಧನ್ ಯೋಜನೆ (ಪಿಎಂ-ಎಸ್‌ವೈಎಂ):-**<br>ಕೇಂದ್ರ ಸರ್ಕಾರದ ಈ ಯೋಜನೆಯಡಿ 18-40 ವರ್ಷ ವಯೋಮಾನದ ಅಸಂಘಟಿತ ಕಾರ್ಮಿಕರು ನೊಂದಾಯಿಸಿಕೊಂಡು 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ.3,000/- ಗಳ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಮಾಸಿಕ ತಲಾ ರೂ.55/- ರಿಂದ ರೂ.200/- ರವರೆಗೆ ಕೇಂದ್ರು ಸರ್ಕಾರವು ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ.<br><br>3. **ನ್ಯೂ ಪೆನ್ಷನ್ ಸ್ಕೀಮ್ ಫಾರ್ ಟ್ರೇಡರ್ಸ್ ಅಂಡ್ ಸೆಲ್ಫ್ ಎಂಪ್ಲಾಯ್ಡ್ ಪರ್ಸನ್ಸ್:-**<br>ಕೇಂದ್ರು ಸರ್ಕಾರದ ಈ ಯೋಜನೆಯಡಿ 18-40 ವರ್ಷ ವಯೋಮಾನದ ಅಂಗಡಿ ಮಾಲೀಕರು, ಚಿಲ್ಲರೆ ವ್ಯಾಪಾರಿಗಳು, ಅಕ್ಕಿ ಗಿರಣಿ ಮಾಲೀಕರು, ಎಣ್ಣೆ ಗಿರಣಿ ಮಾಲೀಕರು, ವರ್ಕ್‌ಶಾಪ್ ಮಾಲೀಕರು, ಕಮಿಷನ್ ಏಜೆಂಟ್ಸ್, ರಿಯಲ್ ಎಸ್ಟೇಟ್‌ನ ಬ್ರೋಕರ್ಸ್, ಸಣ್ಣ ಹೋಟೆಲ್ ಹಾಗೂ ರೆಸ್ಟೋರೆಂಟ್‌ನ ಮಾಲೀಕರು ಹಾಗೂ ಅಂತಹ ಇತರೆ ಸಣ್ಣ ವ್ಯಾಪಾರಗಳಲ್ಲಿ ತೊಡಗಿಸಿಕೊಂಡ ವ್ಯಾಪಾರಿಗಳು/ ಲಘು ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳು ನೊಂದಾಯಿಸಿಕೊಂಡು 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ.3,000/- ಗಳ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಮಾಸಿಕ ತಲಾ ರೂ.55/- ರಿಂದ ರೂ. 200/- ರವರೆಗೆ ಕೇಂದ್ರು ಸರ್ಕಾರವು ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಕೇಂದ್ರು ಸರ್ಕಾರದ ಯಾವುದೇ ಯೋಜನೆಗಳು ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಅನುಷ್ಠಾನಗೊಳ್ಳುತ್ತಿರುವುದಿಲ್ಲ. ಆದರೆ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ಸಂಘಟಿತ ಕಾರ್ಮಿಕರಿಂದ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ.20/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>1. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2. ಕಾರ್ಮಿಕರಿಗೆ ವೈದ್ಯಕೀಯ ನೆರವು<br>3. ಕಾರ್ಮಿಕರಿಗೆ ಅಪಘಾತ ಧನ ಸಹಾಯ<br>4. ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ<br>5. ಮೃತ ಕಾರ್ಮಿಕರ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ |

6. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯುನಿಯನ್‌ಗಳಿಗೆ ಧನ ಸಹಾಯ
7. ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ

ಆ) ಹಾಗಿದ್ದಲ್ಲಿ, ಹೊಸಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ಇಲಾಖೆಯ ವಿವಿಧ ಯೋಜನೆಗಳ ಅಡಿಯಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳೇನು; (ವಿವರ ನೀಡುವುದು)

ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಿಂದ ಹೊಸಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ವಿವಿಧ ಯೋಜನೆಗಳ ಅಡಿಯಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳ ವಿವರ ಈ ಕೆಳಕಂಡಂತಿದೆ

**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ:</u>**

ಈ ಮಂಡಳಿಯಲ್ಲಿ ಹೊಸಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳವತಿಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳು;

| ಕ್ರ. ಸಂ. | ಕಾರ್ಯಕ್ರಮಗಳು | ಸಂಖ್ಯೆ |
|---|---|---|
| 1 | ಕಾನೂನು ಅರಿವು ಕಾರ್ಯಕ್ರಮ | 03 |
| 2 | ಬೀದಿ ನಾಟಕ ಕಾರ್ಯಕ್ರಮ | 01 |
| 3 | ಆಟೋ ಪ್ರಚಾರ | 01 |
| 4 | ಸಂಚಾರಿ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮ | 01 |
| 5 | ತಾಲೂಕು ಮಟ್ಟದ ಕಾರ್ಯಗಾರ ಕಾರ್ಯಕ್ರಮ | 01 |
| 6 | ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮ | 02 |
| 7 | 6ನೇ ತರಗತಿ ಮತ್ತು 9ನೇ ವ್ಯಾಸಂಗ ಮಾಡುತ್ತಿರುವ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶಾಲಾ ಕಿಟ್ ವಿತರಣಾ ಕಾರ್ಯಕ್ರಮ | 01 |

**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**

ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ನೋಂದಣಿಯಾದ ಹಾಗೂ ಸೌಲಭ್ಯ ವಿತರಿಸಿದ ಫಲಾನುಭವಿಗಳ ವಿಧಾನಸಭಾ ಕ್ಷೇತ್ರವಾರು ಮಾಹಿತಿ ಲಭ್ಯವಿರು ವುದಿಲ್ಲ. ಆದರೆ, ಜಿಲ್ಲಾವಾರು ಮಾಹಿತಿ ಲಭ್ಯವಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಿಸಿದಂತೆ ಯೋಜನಾವಾರು ನೋಂದಣಿಯಾದ ಕಾರ್ಮಿಕರ ವಿವರಗಳು ಈ ಕೆಳಕಂಡಂತಿವೆ.

| ಕ್ರ. ಸಂ. | ಯೋಜನೆ/ ಕಾರ್ಯಕ್ರಮ | ಕಾರ್ಮಿಕರ ಸಂಖ್ಯೆ | ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ | ಮೊತ್ತ |
|---|---|---|---|---|
| 01 | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನ | 68,780 | - | - |
| 02 | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | 1,928 | - | - |
| 03 | ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನ | 216 | - | |
| 04 | ಇ-ಶ್ರಮ್ ಕಾರ್ಯಕ್ರಮದಡಿ ಅಸಂಘಟಿತ ಕಾರ್ಮಿಕರ ನೋಂದಣಿ | 1,83,597 | - | - |
| 05 | ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರ ಸಂಬಂದಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ. (ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯ ಸೌಲಭ್ಯಗಳು ಸೇರಿದಂತೆ) | 44,854 | 5 (ಅಪಘಾತ ಪರಿಹಾರ) | ರೂ.25,00,000/- |
| | | | 4 (ಶೈಕ್ಷಣಿಕ ಧನಸಹಾಯ) | ರೂ.40,000/- |
| | ಒಟ್ಟು | 2,99,375 | 9 | 25,40,000/- |

## <u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>

ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರಿಂದ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ.20/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರಿಗೆ ಈ ಕೆಳಕಂಡ ಕಲ್ಯಾಣ ಯೋಜನೆಗಳಡಿ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದೆ.

1. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ.
2. ಕಾರ್ಮಿಕರಿಗೆ ವೈದ್ಯಕೀಯ ನೆರವು.
3. ಕಾರ್ಮಿಕರಿಗೆ ಅಪಘಾತ ಧನ ಸಹಾಯ.
4. ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ.
5. ಮೃತ ಕಾರ್ಮಿಕರ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ.

| | | |
|---|---|---|
| | | 6. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯುನಿಯನ್‌ಗಳಿಗೆ ಧನ ಸಹಾಯ.<br>7. ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ. |
| ಇ) | ಹಾಗಿದ್ದಲ್ಲಿ, ವಿವಿಧ ಯೋಜನೆಯಡಿ ಸವಲತ್ತುಗಳನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು? (ಸಂಪೂರ್ಣ ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಿಂದ ವಿವಿಧ ಯೋಜನೆಯಡಿ ಸವಲತ್ತುಗಳನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆಯ ಸಂಪೂರ್ಣ ಮಾಹಿತಿ ಈ ಈ ಕೆಳಕಂಡಂತಿದೆ.<br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ;**<br>ಕಳೆದ 2 ವರ್ಷಗಳಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಇಲಾಖೆಯ ವಿವಿಧ ಯೋಜನೆಯಡಿ ಸವಲತ್ತುಗಳನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆಯ ವಿವರ |

| ಕ್ರ. ಸಂ. | ಸವಲತ್ತುಗಳು | ಸಂಖ್ಯೆ |
|---|---|---|
| 1 | ಕಟ್ಟಡ ಕಾರ್ಮಿಕರ ನೋಂದಣಿ | 925 |
| 2 | ಶೈಕ್ಷಣಿಕ ಸಹಾಯಧನ | 169 |
| 3 | ಅಪಘಾತ ಮರಣ ಪರಿಹಾರ | 01 |
| 4 | ಅಂತ್ಯಕ್ರಿಯೆ ಹಾಗೂ ಅನುಗ್ರಹರಾಶಿ ಸಹಾಯಧನ | 28 |
| 5 | ಮದುವೆ ಸಹಾಯಧನ | 61 |
| 6 | ವೈದ್ಯಕೀಯ ಸಹಾಯಧನ | 01 |
| 7 | ಪ್ರಮುಖ ವೈದ್ಯಕೀಯ ಸಹಾಯಧನ | 10 |
| 8 | ಹೆರಿಗೆ ಸಹಾಯಧನ | 02 |
| 9 | ಪಿಂಚಣಿ ಸಹಾಯಧನ | 15 |
| 10 | ತಾಯಿಮಗು ಸಹಾಯ ಹಸ್ತ | 03 |
| 11 | ಲ್ಯಾಪ್ ಟಾಪ್ | 45 |
| 12 | 6ನೇ ತರಗತಿಯ ಮಕ್ಕಳ ಶಾಲಾ ಕಿಟ್ | 500 |
| 13 | ಎಲೆಕ್ಟ್ರಿಷಿಯನ್ ಕಿಟ್ | 106 |
| 14 | ಮೇಸನ್ ಕಿಟ್ | 145 |
| 15 | ವೆಲ್ಡಿಂಗ್ ಕಿಟ್ | 66 |
| 16 | ರೋಡ್ ಕಿಟ್ | 20 |
| 17 | ಟೈಲ್ಸ್ ಕಿಟ್ | 31 |
| 18 | 9ನೇ ತರಗತಿಯ ಮಕ್ಕಳ ಶಾಲಾ ಕಿಟ್ | 500 |
| 19 | ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಆರ್ ಪಿಎಲ್ ಕಿಟ್ ವಿತರಣೆ | 608 |
| | **ಒಟ್ಟು** | **3236** |

<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ</u> ವಿವಿಧ ಯೋಜನೆಯಡಿ ಸವಲತ್ತುಗಳನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆಯ ಮಾಹಿತಿಯನ್ನು **ಪ್ರಶ್ನೆ ಸಂಖ್ಯೆ ಆ** ರಲ್ಲಿ ಉತ್ತರಿಸಿದೆ.

| | | |
|---|---|---|
| | | **<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br><br>ಕಳೆದ ಎರಡು ವರ್ಷಗಳಲ್ಲಿ ಹೊಸಕೋಟೆ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ವಿವಿಧ ಕಲ್ಯಾಣ ಯೋಜನೆಗಳಡಿ ಸವಲತ್ತು ಪಡೆದಿರುವ ಫಲಾನುಭವಿಗಳ ವಿವರಗಳು **ಅನುಬಂಧ -2** ರಲ್ಲಿ ಒದಗಿಸಿದೆ. |

**ಕಾಇ 335 ಎಲ್‌ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ -1

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: (1283)1306**

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ**

1. **ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ. 2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ. 50,000/-.
8. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ. 71,000/-** ಸಹಾಯಧನ.
9. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| **ಕ್ರ.ಸಂ** | **ಕೋರ್ಸ್/ತರಗತಿ** | **ತರಗತಿ/ ಪದವಿ (ಪ್ರತಿ ವರ್ಷಕ್ಕೆ) ( ರೂ.ಗಳಲ್ಲಿ)** | **ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ)** |
|---|---|---|---|
| 1 | 1ನೇ ತರಗತಿಯಿಂದ 5ನೇ ತರಗತಿ | **1,800/-** | - |
| 2 | 6ನೇ ತರಗತಿಯಿಂದ 8ನೇ ತರಗತಿ | **2,400/-** | - |
| 3 | 9 ಮತ್ತು 10ನೇ ತರಗತಿ | **3,000/-** | - |
| 4 | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | **6,000/-** | - |
| 5 | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | **10,000/-** | - |
| 6 | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | **12,000/-** | - |
| 7 | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿ | **15,000/-** | **20,000/-** |

| | | | |
|---|---|---|---|
| | ಕಾಂ, ಬಿಎಸ್ಸಿ ಮುಂತಾದವುಗಳು | | |
| 8 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | **20,000/-** | **25,000/-** |
| 9 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| 10 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | **20,000/-** | **25,000/-** |
| 11 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| 12 | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | **40,000/-** | **50,000/-** |
| 13 | ಪಿಹೆಚ್‌ಡಿ/ಎಂಫಿಲ್ (03 ವರ್ಷ ಅವಧಿಯವರೆಗೆ) | **40,000/-** | - |
| 14 | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | **50,000/-** | **60,000/-** |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ.
11. **ಅಪಘಾತ ಪರಿಹಾರ:** ನೋಂದಾಯಿತ ಕಟ್ಟಡ ಕಾರ್ಮಿಕರು **ಮರಣ** ಹೊಂದಿದ್ದಲ್ಲಿ **ರೂ.5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-.**
14. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/- ಗಳ** ಸಹಾಯಧನ.

# ಅನುಬಂಧ-2

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್ ನಾಗರಾಜು (ಎಂ.ಟಿ.ಬಿ) (ವಿಧಾನ ಸಭೆಯಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1306**

**ಕಳೆದ ಎರಡು ವರ್ಷಗಳಲ್ಲಿ ಹೊಸಕೋಟೆ ವಿಧಾನ ಸಭಾ ಕ್ಷೇತ್ರಕ್ಕೆ ವಿವಿಧ ಕಲ್ಯಾಣ ಯೋಜನೆಗಳಡಿ ಸವಲತ್ತು ಪಡೆದಿರುವ ಫಲಾನುಭವಿಗಳ ವಿವರಗಳು**

| ಕ್ರ.ಸಂ. | ಯೋಜನೆಗಳು | 2023-24 | | 2024-25 | |
|---|---|---|---|---|---|
| | | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ |
| 1 | ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ | 45 | 4,50,000 | 48 | 4,04,000 |
| 2 | ಕಾರ್ಮಿಕರಿಗೆ ವೈದ್ಯಕೀಯ ನೆರವು | - | - | - | - |
| 3 | ಕಾರ್ಮಿಕರಿಗೆ ಅಪಘಾತ ಧನ ಸಹಾಯ | - | - | - | - |
| 4 | ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ | 8 | 80,000 | 7 | 70,000 |
| 5 | ಮೃತ ಕಾರ್ಮಿಕರ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ | 1 | 10,000 | 7 | 70,000 |
| 6 | ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್‌ಗಳಿಗೆ ಧನ ಸಹಾಯ | - | - | - | - |
| 7 | ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ನೋಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ | - | - | - | - |
| | **ಒಟ್ಟು** | **54** | **5,40,000** | **62** | **5,44,000** |